**ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | ಐವನ್ ಡಿ ಸೋಜಾ |
| ಮಾನ್ಯ ಸದಸ್ಯರ ಹೆಸರು | : | 588 (673) |
| ಉತ್ತರಿಸಬೇಕಾದ ದಿನಾಂಕ | : | 18.8.2025 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

*****

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ದಕ್ಷಿಣ ಕನಡ ಜಿಲ್ಲೆಯ ನಗರದ ಸರಕಾರಿ ವೆನ್‌ಲಾಕ್ ಆಸ್ಪತ್ರೆ ಅಧೀನದಲ್ಲಿರುವ 2 ಎಕರೆ 7 ಗುಂಟೆ ಜಾಗದಲ್ಲಿ ನರ್ಸಿಂಗ್ ಕಾಲೇಜು, ಅರೆ ವೈದ್ಯಕೀಯ ಕಾಲೇಜುಗಳನ್ನು ನಿರ್ಮಾಣ ಮಾಡಿ ಪ್ರತ್ಯೇಕವಾದ ಕಾಲೇಜು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ (ವಿವರ ನೀಡುವುದು)</td><td>ವೆನ್‌ಲಾಕ್ ಆಸ್ಪತ್ರೆಯ ಅಧೀನದಲ್ಲಿರುವ ಅತ್ತಾವರ ಹೊಟೇಲ್ ಪಕ್ಕದಲ್ಲಿರುವ 2.71 ಎಕರೆ ಜಾಗದಲ್ಲಿ ಪ್ಯಾರಮೆಡಿಕಲ್ ಕಾಲೇಜು ನಿರ್ಮಿಸುವ ಬಗ್ಗೆ ಜಿಲ್ಲಾ ಶಸ್ತ್ರಚಿಕಿತ್ಸಕರು ಹಾಗೂ ಅಧೀಕ್ಷಕರು ಮತ್ತು ಪ್ರಾಂಶುಪಾಲರು ವೆನ್ ಲಾಕ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸಸ್, ವೆನಲಾಕ್ ಜಿಲ್ಲಾಸ್ಪತ್ರೆ, ಮಂಗಳೂರು ಇವರು ದಿ: 21.7.2025 ರಂದು ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರನ್ನು ಕೋರಿರುತ್ತಾರೆ. ಈ ಪ್ರಸ್ತಾವನೆಯು ಆಯುಕ್ತರು, ಆಕುಕ ಸೇವೆಗಳು ಕಛೇರಿಯಲ್ಲಿ ಪರಿಶೀಲನೆಯಲ್ಲಿದೆ.</td></tr>
<tr><td>ಆ.</td><td>ವೆನ್‌ಲಾಕ್ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳಿಗೆ ಮತ್ತು ಇತರೆ ಸಿಬ್ಬಂದಿಗಳಿಗೆ ವಸತಿ ಗೃಹಗಳು ಇಲ್ಲದಿರುವುದರಿಂದ ಗುಣಮಟ್ಟದ ಸೇವೆ ನೀಡಲು ಇದೇ ಸ್ಥಳದಲ್ಲಿ ವಸತಿ ಗೃಹ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದೇ: (ವಿವರ ನೀಡುವುದು)</td><td>ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳಿಗೆ ಮತ್ತು ಇತರೆ ಸಿಬ್ಬಂದಿಗಳಿಗೆ ವಸತಿಗೃಹ ನಿರ್ಮಿಸುವ ಬಗ್ಗೆ ಪ್ರಸ್ತಾವನೆ ಸ್ವೀಕೃತವಾದಲ್ಲಿ ಅನುದಾನದ ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು.</td></tr>
<tr><td>ಇ.</td><td>ದಕ್ಷಿಣ ಕನಡ ಜಿಲ್ಲೆಯ ನಗರದ ಸರಕಾರಿ ವೆನ್‌ಲಾಕ್ ಆಸ್ಪತ್ರೆ ಅಧೀನದಲ್ಲಿರುವ 2 ಎಕರೆ 7 ಗುಂಟೆ ಜಾಗದಲ್ಲಿ ನರ್ಸಿಂಗ್ ಕಾಲೇಜು, ಅರೆ ವೈದ್ಯಕೀಯ ಕಾಲೇಜುಗಳನ್ನು ನಿರ್ಮಾಣ ಮಾಡಿ ಪ್ರತ್ಯೇಕವಾದ ಕಾಲೇಜು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ (ವಿವರ ನೀಡುವುದು)</td><td rowspan="3">ದಿನಾಂಕ 01.08.2025ರಂದು ನಡೆದ ಆರೋಗ್ಯ ರಕ್ಷಾ ಸಮಿತಿ ಮಹಾ ಸಭೆಯಲ್ಲಿ ವೆನ್‌ಲಾಕ್ ಆಸ್ಪತ್ರೆಯು ನಗರದ ಹೃದಯ ಭಾಗದಲ್ಲಿ ಇರುವುದರಿಂದ ರೋಗಿಗಳ ಹಿತದೃಷ್ಟಿಯಿಂದ ಆಸ್ಪತ್ರೆಯ ಅಧೀನದಲ್ಲಿರುವ ಆಮಂತ್ರಣ ಹೋಟೆಲ್ ಹಿಂಭಾಗದಲ್ಲಿರುವ ಜಾಗದಲ್ಲಿ ಜಯದೇವ ಆಸ್ಪತ್ರೆಯ ಹೃದ್ರೋಗ ಚಿಕಿತ್ಸೆ ಮತ್ತು ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ಸ್ಯಾಟಲೈಟ್ ಸೆಂಟರ್ ತೆರೆಯುವ ಹಾಗೂ ಮೂಡುಶೆಡ್ಡೆಯಲ್ಲಿರುವ ಕ್ಷಯ ಮತ್ತು ಎದೆ ರೋಗಗಳ ಆಸ್ಪತ್ರೆಯ ಜಾಗದಲ್ಲಿ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜ್ ನಿರ್ಮಿಸುವ ಬಗ್ಗೆ ಪರಿಶೀಲನೆಯಲ್ಲಿದ್ದು, ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.</td></tr>
<tr><td>ಈ.</td><td>ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ಸ್ಯಾಟಲೈಟ್ ಸೆಂಟರ್ ಗುಲ್ಬರ್ಗ ಜಿಲ್ಲೆಯಲ್ಲಿ ಈಗಾಗಲೇ ಕಾರ್ಯಾರಂಭವಾಗಿದ್ದು, ತುಮಕೂರು, ಮೈಸೂರು, ಶಿವಮೊಗ್ಗ ಜಿಲ್ಲೆಗಳಲ್ಲಿರುವ ಸೆಂಟರ್‌ಗಳ ಕಾಮಗಾರಿಗಳು ಪ್ರಗತಿಯಲ್ಲಿರುವುದರಿಂದ ಹಾಗೂ ಬೆಳಗಾವಿಯಲ್ಲಿ ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿರುವುದರಿಂದ ದಕ್ಷಿಣ ಕನಡ ಜಿಲ್ಲೆ ವೆನ್‌ಲಾಕ್ ಆಸ್ಪತ್ರೆಯಲ್ಲಿ 10-15 ಜಿಲ್ಲೆಗಳಿಗೆ ಸೇವೆ ನೀಡುತ್ತಿದ್ದು ಮತ್ತು ವಿಭಾಗ ಆಸ್ಪತ್ರೆಯಾಗಿ ಗುರುತಿಸಿಕೊಂಡಿದ್ದು, ಈ ಭಾಗದಲ್ಲಿ ಮೇಲಿನ ಸ್ಯಾಟಲೈಟ್ ಸೆಂಟರ್ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ: (ವಿವರ ನೀಡುವುದು)</td></tr>
<tr><td>ಉ</td><td>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 15 ಜಿಲ್ಲೆಗಳ ಗ್ರಾಮಾಂತರ ಭಾಗದ ರೋಗಿಗಳು ಹೃದ್ರೋಗ ಮತ್ತು ಕ್ಯಾನ್ಸರ್ ರೋಗದಿಂದ ಮೃತಪಡುವುದು ಹೆಚ್ಚಾಗುತ್ತಿದ್ದು, ಸರಿಯಾದ ಮಾಹಿತಿ ಮತ್ತು ಪರೀಕ್ಷೆ ಕೊರತೆ ನೀಗಿಸಲು ಸ್ಯಾಟಲೈಟ್ ಸೆಂಟರ್ ತೆರೆಯಲು ಇಲಾಖೆ ತುರ್ತು ಕ್ರಮ ಕೈಗೊಳ್ಳುವುದೇ; ಈ ಬಗ್ಗೆ ಈಗಾಗಲೇ ಜಿಲ್ಲೆಯ ಬಡರೋಗಿಗಳ ಪರವಾಗಿ ನಿರ್ಧಾರ ಕೈಗೊಳ್ಳಲು ಸೂಕ್ತವಲ್ಲವೇ? (ವಿವರ ನೀಡುವುದು)</td></tr>
</table>

**ಆಕುಕ 274 CORD 2025**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**